# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ: 21ನೇ ಸೆಪ್ಟೆಂಬರ್, 2020**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಸುಗ್ರೀವಾಜ್ಞೆ ಮೂಲಕ ಕರ್ನಾಟಕ ಭೂ ಸುಧಾರಣೆ ಕಾಯ್ದೆಗೆ ತಂದಿರುವ ತಿದ್ದುಪಡಿಯು ರೈತಾಪಿ ವರ್ಗಕ್ಕೆ ಮಾರಕವಾಗಿರುವುದರಿಂದ ತಿದ್ದುಪಡಿಯನ್ನು ಹಿಂಪಡೆಯುವ ಕುರಿತು **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

...2..

**ಆ) ಶ್ರೀಯುತರುಗಳಾದ ಬಸವರಾಜ ಪಾಟೀಲ್ ಇಟಗಿ ಮತ್ತು ಪ್ರಕಾಶ್ ಕೆ. ರಾಥೋಡ್** ಅವರುಗಳು ಆಲಮಟ್ಟಿ ಜಲಾಶಯದ ಅಣೆಕಟ್ಟಿನ ಎತ್ತರವನ್ನು 519.6 ರಿಂದ 524 ಮೀಟರ್‌ವರೆಗೆ ಎತ್ತರಿಸುವ ಕುರಿತು **ಮಾನ್ಯ ಜಲಸಂಪನ್ಮೂಲ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀಮತಿ ಭಾರತಿ ಶೆಟ್ಟಿ ಮತ್ತು ಶ್ರೀ ಲಹರ್ ಸಿಂಗ್ ಸಿರೋಯಾ** ಅವರುಗಳು ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಮುಕ್ತವಾಗಿ ಮಾದಕ ವಸ್ತುಗಳ ಲಭ್ಯತೆ, ಸಾಗಾಟ ಮತ್ತು ಮಾರಾಟದ ಮೇಲಿನ ಅನಿಯಂತ್ರಣದಿಂದಾಗಿ ಸಮಾಜದ ಮೇಲೆ ಉಂಟುಮಾಡುತ್ತಿರುವ ದುಷ್ಪರಿಣಾಮ ಹಾಗೂ ಈ ನಿಟ್ಟಿನಲ್ಲಿ ಅಗತ್ಯ ಕಾನೂನು ನಿಯಮಗಳನ್ನು ಬಲಪಡಿಸುವ ಕುರಿತು **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

**ಅ) ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಸ್ನಾತಕೋತ್ತರ ಪದವಿಗೆ ಎಂ.ಸಿ.ಐ ನವರು ಅನುಮತಿ ನೀಡಿದ್ದು, ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಬೋಧಕ ಸಿಬ್ಬಂದಿಗಳ ಕೊರತೆ ಇರುತ್ತದೆ. ಸರ್ಕಾರ ಪ್ರಸ್ತುತ ಬೋಧಕ ಹುದ್ದೆಗಳನ್ನು ಸೃಜಿಸಲು ಸಾಧ್ಯವಿಲ್ಲವೆಂದು ಕೋರ್ಸುಗಳನ್ನು ಪ್ರಾರಂಭಿಸುವುದನ್ನು ಕೈಬಿಡಲು ತಿಳಿಸಿರುವುದರಿಂದ ಉಂಟಾಗಿರುವ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

**ಆ) ಶ್ರೀ ಕೆ.ಟಿ.ಶ್ರೀಕಂಠೇಗೌಡ** ಅವರು ಮಂಡ್ಯ ಜಿಲ್ಲೆಯಲ್ಲಿರುವ ಮಂಡ್ಯ ಮೈಷುಗರ್ ಸಕ್ಕರೆ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲಿ ಉಳಿಸಿಕೊಂಡು ಆರಂಭಿಸುವ ಕುರಿತು ಪ್ರಸ್ತಾಪಿಸುವುದು.

**ಇ) ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ** ಅವರು ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಲಾಗಿರುವ ಜಾತಿವಾರು ಜನಗಣತಿ ವರದಿಯನ್ನು ಬಿಡುಗಡೆಗೊಳಿಸಿ ತ್ವರಿತವಾಗಿ ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**